ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 852 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 22.02.2024 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಪ್ರಶ್ನೆ | ಉತ್ತರ |
|---|---|
| (ಅ) ಬೀದರ್ ಜಿಲ್ಲೆಯಲ್ಲಿರುವ ಬೀದಿ ಬದಿ ವ್ಯಾಪಾರಿಗಳ ಹಿತರಕ್ಷಣೆಗಾಗಿ ಸರ್ಕಾರವು ಯಾವುದಾದರೂ ಕಲ್ಯಾಣ ಯೋಜನೆಗಳನ್ನು ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ಆ ಯೋಜನೆಗಳ ವಿವರಗಳನ್ನು ನೀಡುವುದು; | ದೀನದಯಾಳ್ ಅಂತ್ಯೋದಯ ಯೋಜನೆ– ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದ ನಗರದ ಬೀದಿ ಬದಿ ವ್ಯಾಪಾರಿಗಳಿಗೆ ಬೆಂಬಲ ಉಪಘಟಕದಡಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವ್ಯಾಪಾರ ವಹಿವಾಟು ನಡೆಸುವ ಬೀದಿ ಬದಿ ವ್ಯಾಪಾರಸ್ಥರನ್ನು ಗುರುತಿಸಿ ಅವರಿಗೆ ಗುರುತಿನ ಚೀಟಿ ವಿತರಣೆ ಮತ್ತು ಮಾರಾಟ ಪ್ರಮಾಣ ಪತ್ರ ನೀಡಲಾಗುತ್ತಿದೆ ಹಾಗೂ ಮಾರಾಟ ವಲಯ ಅಭಿವೃದ್ಧಿ ಪಡಿಸುವ ಮೂಲಕ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ. ಆಹಾರ ಬೀದಿ ಬದಿ ವ್ಯಾಪಾರಿಗಳಿಗೆ FSSAI ತರಬೇತಿಯನ್ನು ನೀಡಿ ಪ್ರಮಾಣಪತ್ರವನ್ನು ಸಹ ನೀಡಲಾಗಿರುತ್ತದೆ.<br><br>ಮುಂದುವರೆದು, ಕೇಂದ್ರ ಪುರಸ್ಕೃತ ಯೋಜನೆಯಾದ ಪ್ರಧಾನ ಮಂತ್ರಿ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ 1ನೇ, 2ನೇ ಮತ್ತು 3ನೇ ಹಂತದಲ್ಲಿ ಕ್ರಮವಾಗಿ ರೂ.10,000/–, ರೂ.20,000/– ಮತ್ತು ರೂ.50,000/– ಗಳವರೆಗೆ ಕಿರು ಸಾಲ ಸೌಲಭ್ಯ ಒದಗಿಸುವ ಮೂಲಕ ವ್ಯಾಪಾರ ವೃದ್ಧಿಸಿಕೊಳ್ಳಲು ಸಹಕರಿಸಲಾಗುತ್ತಿದೆ. ಅಲ್ಲದೇ ಸದರಿ ಯೋಜನೆಯಡಿ ಸಾಲ ಸೌಲಭ್ಯ ಪಡೆದ ಫಲಾನುಭವಿಗಳಿಗೆ ಮತ್ತು ಅವರ ಕುಟುಂಬದ ಸದಸ್ಯರುಗಳಿಗೆ ಈ ಕೆಳಕಂಡ 08 ಸಾಮಾಜಿಕ ಭದ್ರತಾ ಯೋಜನೆಯನ್ನು ಕಲ್ಪಿಸಲಾಗುತ್ತಿರುತ್ತದೆ.<br><br>1. ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆ<br>2. ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆ<br>3. ಪ್ರಧಾನ ಮಂತ್ರಿ ಜನ್‌ಧನ್ ಯೋಜನೆ<br>4. ಮಾತೃ ವಂದನಾ<br>5. ಜನನಿ ಸುರಕ್ಷಾ ಯೋಜನೆ<br>6. ಪ್ರಧಾನ ಮಂತ್ರಿ ಮನ್‌ಧನ್ ಯೋಜನೆ<br>7. ಒಂದು ರಾಷ್ಟ್ರ ಒಂದು ರೇಷನ್ ಕಾರ್ಡ್<br>8. ಅಸಂಘಟಿತ ಕಾರ್ಮಿಕರಿಗೆ ಗುರುತಿನ ಚೀಟಿ ವಿತರಣೆ. |
| (ಆ) ಬೀದಿ ಬದಿ ವ್ಯಾಪಾರಸ್ಥರನ್ನು ಗುರುತಿಸಲು ಸರ್ಕಾರದ ವತಿಯಿಂದ ಸರ್ವೆ ಕಾರ್ಯ ಮಾಡಲಾಗಿದೆಯೇ; (ಮಾಹಿತಿ ನೀಡುವುದು) | ಹೌದು,<br><br>ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ ಬೀದಿ ಬದಿ ವ್ಯಾಪಾರಿಗಳನ್ನು ಸಮೀಕ್ಷೆಯ ಮೂಲಕ ಗುರುತಿಸಲು ಕ್ರಮವಹಿಸಲಾಗಿದೆ. |

| | |
|---|---|
| (ಇ) ಸರ್ವೆ ಮಾಡಿದ್ದಲ್ಲಿ, ಬೀದರ್ ಜಿಲ್ಲೆಯಲ್ಲಿ ಎಷ್ಟು ಜನ ಬೀದಿ ಬದಿ ವ್ಯಾಪಾರ ಮಾಡಿ ಜೀವನ ಸಾಗಿಸುತ್ತಿದ್ದಾರೆ? (ತಾಲ್ಲೂಕುವಾರು ವಿವರ ನೀಡುವುದು) | ಬೀದರ್ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬೀದಿ ಬದಿ ವ್ಯಾಪಾರಿಗಳನ್ನು ಗುರುತಿಸಲಾಗಿದ್ದು, ವಿವರ ಈ ಕೆಳಕಂಡಂತಿದೆ. |

| **ಕ್ರ.ಸಂ** | **ನಗರ ಸ್ಥಳೀಯ ಸಂಸ್ಥೆಯ ಹೆಸರು** | **ಗುರುತಿಸಲ್ಪಟ್ಟ ಬೀದಿ ವ್ಯಾಪಾರಿಗಳ ಸಂಖ್ಯೆ** |
|---|---|---|
| 1 | ಬಸವ ಕಲ್ಯಾಣ | 1058 |
| 2 | ಭಾಲ್ಕಿ | 326 |
| 3 | ಔರಾದ್ | 122 |
| 4 | ಬೀದರ್ | 1348 |
| 5 | ಹುಮನಬಾದ್ | 537 |
| 6 | ಚಿತಗುಪ್ಪ | 362 |
| 7 | ಹಳ್ಳಿಕೇಡ | 71 |
| | **ಒಟ್ಟು** | **3824** |

ಸಂಖ್ಯೆ: ಕೌಉಜೀಇ 6 ಕೌಗುಪ್ರ 2024

**(ಡಾ. ಶರಣಪ್ರಕಾಶ ಆರ್ ಪಾಟೀಲ್)**
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.